ಎ-72-(129)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತರಾಮ್ ಬುಡ್ನ ಸಿದ್ದಿ ರವರ ಇವರು ನಿಯಮ 72ರ ಅಡಿಯಲ್ಲಿ ಇವರು ಗಮನ ಸೆಳೆಯುವ ಸೂಚನೆಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖಾ ಸಚಿವರ ಉತ್ತರ.

ಪ್ರಶ್ನೆ:

ನಾಲ್ಕು ಚಕ್ರ ವಾಹನ ಹೊಂದಿವವರ ಬಿಪಿಎಲ್ ರೇಷನ್ ಕಾರ್ಡ್ ರದ್ದುಪಡಿಸಲು ಆದೇಶ ನೀಡಿದ್ದು, ಸರ್ಕಾರದ ವಿವಿಧ ಯೋಜನೆಗಳಲ್ಲಿ ಟ್ಯಾಕ್ಸಿ ಸೇವೆಗಾಗಿ ನಾಲ್ಕು ಚಕ್ರದ ವಾಹನ ಖರೀದಿಸಲು ಬಿಪಿಎಲ್ ಕಾರ್ಡ್ ಕಡ್ಡಾಯವಾಗಿದೆ. ಇದರಿಂದ ಸರ್ಕಾರದ ಸಹಾಯಧನ ಪಡೆದು ನಾಲ್ಕು ಚಕ್ರ ವಾಹನ ಖರೀದಿಸಿದ ಅನೇಕ ಫಲಾನುಭವಿಗಳು ಗೊಂದಲದಲ್ಲಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ಸರ್ಕಾರಿ ಆದೇಶ ಸಂಖ್ಯೆ: ಆನಾಸ 116 ಡಿಆರ್‌ಎ 2015 ಬೆಂಗಳೂರು, ದಿನಾಂಕ:25.03.2017 ಮತ್ತು ಸರ್ಕಾರಿ ಆದೇಶ ಸಂಖ್ಯೆ:ಆನಾಸ 116 ಡಿಆರ್‌ಎ 2015 ಬೆಂಗಳೂರು, ದಿನಾಂಕ:20.05.2017ರಂತೆ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲು ನಾಲ್ಕು ಚಕ್ರದ ವಾಹನಕ್ಕೆ ಸಂಬಂಧಿಸಿದಂತೆ ಹೊರಗಿಡುವ ಮಾನದಂಡ (Exclusion Criteria) ದಲ್ಲಿ ಈ ಕೆಳಗಿನಂತೆ ಷರತ್ತನ್ನು ವಿಧಿಸಲಾಗಿದೆ.

ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್ ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು ಆದ್ಯತಾ ಪಡಿತರ ಚೀಟಿಯನ್ನು ಪಡೆಯಲು ಅರ್ಹರಿರುವುದಿಲ್ಲ.

ಆದರಂತೆ, ಜೀವನೋಪಾಯಕ್ಕಾಗಿ ಹಳದಿ ಬಣ್ಣದ ಫಲಕದ ನೋಂದಣಿ ಇರುವ ನಾಲ್ಕು ಚಕ್ರದ ಒಂದು ವಾಹನ ಹೊಂದಿರುವವರು ಆದ್ಯತಾ ಪಡಿತರ ಚೀಟಿ ಹೊಂದಲು ಅವಕಾಶವಿದೆ.

ಆನಾಸ 110 ಡಿಆರ್ ಎ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.